# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

**ವಿಶೇಷ ರಾಜ್ಯ ಪತ್ರಿಕೆ**

| | | |
|---|---|---|
| ಭಾಗ – ೪ಎ<br>Part – IVA | ಬೆಂಗಳೂರು, ಮಂಗಳವಾರ, ೧೨, **ಆಗಸ್ಟ್**, ೨೦೨೫( **ಶ್ರಾವಣ** ,೨೧, ಶಕವರ್ಷ, ೧೯೪೭)<br>BENGALURU, TUESDAY, 12, AUGUST, 2025 ( SHRAVANA ,21 , SHAKAVARSHA, 1947) | ನಂ. ೪೬೩<br>No. 463 |


**ಕರ್ನಾಟಕ ವಿಧಾನಸಭೆ**

**ಹದಿನಾರನೇ ವಿಧಾನಸಭೆ**

**ಏಳನೇ ಅಧಿವೇಶನ**

## ಕೂಡಲ ಸಂಗಮ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–39)**

ಕೂಡಲ ಸಂಗಮ ಅಭಿವೃದ್ಧಿ ಮಂಡಳಿ ಅಧಿನಿಯಮ 1994ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕೂಡಲ ಸಂಗಮ ಅಭಿವೃದ್ಧಿ ಮಂಡಳಿ ಅಧಿನಿಯಮ 1994 (1994ರ ಕರ್ನಾಟಕ ಅಧಿನಿಯಮ ಸಂಖ್ಯೆ 37)ನ್ನು, ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕೂಡಲ ಸಂಗಮ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಕೂಡಲ ಸಂಗಮ ಅಭಿವೃದ್ಧಿ ಮಂಡಳಿ, 1994 (1994ರ ಕರ್ನಾಟಕ ಅಧಿನಿಯಮ ಸಂಖ್ಯೆ 37)ರ, 3ನೇ ಪ್ರಕರಣದ, (4)ನೇ ಉಪಪ್ರಕರಣದಲ್ಲಿರುವ, (ಎ) ಖಂಡದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(ಎ) ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾರೇ ಇತರ ಮಂತ್ರಿ - ಪದನಿಮಿತ್ತ ಅಧ್ಯಕ್ಷರು ".

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾವುದೇ ಇತರ ಮಂತ್ರಿಯವರು ಕೂಡಲ ಸಂಗಮ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗುವ ಕುರಿತಾದ ಉಪಬಂಧವನ್ನು ಪರಿಷ್ಕರಿಸಲು, ಕೂಡಲ ಸಂಗಮ ಅಭಿವೃದ್ಧಿ ಮಂಡಳಿ, 1994 (1994ರ ಕರ್ನಾಟಕ ಅಧಿನಿಯಮ ಸಂಖ್ಯೆ 37)ನ್ನು, ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ,

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ಯಾವುದೇ ಹೆಚ್ಚಿನ ವೆಚ್ಚವು ಉಂಟಾಗುವುದಿಲ್ಲ.

**ಕೃಷ್ಣ ಭೈರೇಗೌಡ**
ಕಂದಾಯ ಮಂತ್ರಿ

**ಎಂ.ಕೆ. ವಿಶಾಲಾಕ್ಷಿ**
ಕಾರ್ಯದರ್ಶಿ
ಕರ್ನಾಟಕ ವಿಧಾನಸಭೆ

## ಅನುಬಂಧ
## ಕೂಡಲ ಸಂಗಮ ಅಭಿವೃದ್ಧಿ ಮಂಡಳಿ ಅಧಿನಿಯಮ, 1994ರ (1994ರ ಕರ್ನಾಟಕ ಅಧಿನಿಯಮ ಸಂಖ್ಯೆ 37) ಉದ್ಧೃತ ಭಾಗ

**XXX XXX XXX**

**3. ಮಂಡಲಿಯ ರಚನೆ.-** (1) ಈ ಅಧಿನಿಯಮದ ಪ್ರಾರಂಭದ ತರುವಾಯ ಆದಷ್ಟು ಬೇಗನೆ, ಈ ಅಧಿನಿಯಮದ ಉದ್ದೇಶಗಳಿಗಾಗಿ ಕೂಡಲ ಸಂಗಮ ಕ್ಷೇತ್ರ ಅಭಿವೃದ್ಧಿ ಮಂಡಲಿ ಎಂದು ಕರೆಯಲಾಗುವ ಒಂದು ಮಂಡಲಿಯನ್ನು ಸ್ಥಾಪಿಸತಕ್ಕದ್ದು.

(2) ಮಂಡಲಿಯು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ಸ್ಥಳದಲ್ಲಿ ತನ್ನ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರತಕ್ಕದ್ದು.

(3) ಮಂಡಲಿಯು, ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಮತ್ತು ವಿಲೆ ಮಾಡುವ ಮತ್ತು ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(4) ಮಂಡಲಿಯು ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(ಎ) ಮುಖ್ಯ ಮಂತ್ರಿಯು ಮಂಡಲಿಯ ಪದನಿಮಿತ್ತ ಅಧ್ಯಕ್ಷನಾಗಿರತಕ್ಕದ್ದು;

(ಬಿ) ಕೃಷ್ಣ ಮೇಲ್ದಂಡೆ ಯೋಜನೆಯಿಂದ ಸ್ಥಳಾಂತರಿತವಾದ ಕುಟುಂಬಗಳ ಪುನರ್ವಸತಿ ಮತ್ತು ಪುನರ್‌ವ್ಯವಸ್ಥೆ ಯೋಜನೆಯ ಪ್ರಭಾರದಲ್ಲಿರುವ ಸಚಿವರು;

(ಸಿ) ಭಾರಿ ನೀರಾವರಿಯ ಪ್ರಭಾರದಲ್ಲಿರುವ ಸಚಿವರು;

(ಡಿ) ಕೂಡಲ ಸಂಗಮ ಕ್ಷೇತ್ರವನ್ನು ಭಾಗಶಃ ಅಥವಾ ಪೂರ್ಣವಾಗಿ ಪ್ರತಿನಿಧಿಸುವ ಹಾಗೂ ಅದರ ಎಲ್ಲೆಗಳೊಳಗೆ ತಮ್ಮ ಚುನಾವಣಾ ಕ್ಷೇತ್ರವನ್ನು ಹೊಂದಿರುವ ಸಂಸತ್ ಸದಸ್ಯರು ಮತ್ತು ರಾಜ್ಯ ವಿಧಾನಮಂಡಲದ ಸದಸ್ಯರು;

(ಇ) ಅಧ್ಯಕ್ಷ, ಬಸವ ಸಮಿತಿ, ಬಸವ ಭವನ, ಬಸವೇಶ್ವರ ವೃತ್ತ, ಬೆಂಗಳೂರು;

**XXX XXX XXX**

KARNATAKA LEGISLATIVE ASSEMBLY

SIXTEENTH LEGISLATIVE ASSEMBLY

SEVENTH SESSION

# THE KUDALA SANGAMA DEVELOPMENT BOARD (AMENDMENT) BILL, 2025

**(LA Bill No. 39 of 2025)**

A Bill further to amend the Kudala Sangama Development Board Act, 1994.

Whereas it is expedient to amend the Kudala Sangama Development Board Act, 1994 (Karnataka Act No. 37 of 1994) for the purpose hereinafter appearing:

Be it enacted by the Karnataka State Legislature in the Seventy sixth year of the Republic of India as follows :-

**1. Short title and commencement.-** (1) This Act may be called the Kudala Sangama Development Board (Amendment) Act, 2025.

(2) it shall come into force at once.

**2. Amendment of section 3.-** In the Kudala Sangama Development Board Act, 1994 (Karnataka Act No. 37 of 1994), in section 3, in sub-section (4), for clause (a), the following shall be substituted, namely:-

"(a) The Chief Minister or Revenue Minister or any other Minister as chosen by the Chief Minister - Ex-officio Chairman".

## STATEMENT OF OBJECTS AND REASONS

It is considered necessary further to amend the Kudala Sangama Development Board Act, 1994 (Karnataka Act No.37 of 1994) to revise the provision regarding Chairman of the Kudala Sangama Development Board as - the Chief Minister or Revenue Minister or any other Minister as chosen by the Chief Minister.

Hence, the Bill.

## FINANCIAL MEMORANDUM

There is no extra expenditure involved in the proposed legislative measure.

**KRISHNA BYREGOWDA**
Minister for Revenue

**M.K. VISHALAKSHI**
Secretary
Karnataka Legislative Assembly

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



**ANNEXURE**

**EXTRACT OF THE KUDALA SANGAMA DEVELOPMENT BOARD ACT, 1994 (KARNATAKA ACT NO.37 OF 1994)**

**XX XX XX**

**3. Constitution of the Board.-** (1) As soon as may be, after the commencement of this Act, there shall be established for the purposes of this Act, a Board called the Kudala Sangama Development Board.

(2) The Board shall have its headquarters at such place as may be determined by the Board from time to time.

(3) The Board shall be a body corporate by the name aforesaid, having perpetual succession and a common seal with power to acquire, hold and dispose of property, both movable and immovable, and to contract and shall by the said name sue and be sued.

(4) The Board shall consist of the following members namely:-

(a) the Chief Minister, who shall be the ex-officio Chairman of the Board;

(b) the Minister in charge of rehabilitation and re-settlement of project displaced families of Upper Krishna Project;

(c) the Minister in charge of Major Irrigation;

(d) the Members of Parliament and the Members of the State Legislature representing a part or whole of the Kudala Sangama Kshetra, whose electoral constituencies lie within the limits of it;

(e) the President, Basava Samiti, Basava Bhavana, Basaveshwara Circle, Bangalore;

**XX XX XX**

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH